207 (428) : ಶ್ರೀ ಹೆಚ್. ಆಂಜನೇಯ (ಭರಮಸಾಗರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿತ್ರದುರ್ಗ ಹಾಗೂ ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಭಾರಿ ಭ್ರಷ್ಟಾಚಾರ ನಡೆದಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಆ) ಕಳೆದ 3 ವರ್ಷಗಳಿಂದ ಎಷ್ಟು ಭೂಮಿಯನ್ನು ಈ ಪ್ರಾಧಿಕಾರಗಳು ಖರೀದಿ ಮಾಡಿ ನಿವೇಶನಗಳನ್ನಾಗಿ ಅಭಿವೃದ್ಧಿಪಡಿಸಲಾಗಿದೆ;

ಇ) ಮೂಲ ನಿವೇಶನಗಳು ಸೇರಿದಂತೆ ಎಲ್ಲಾ ನಿವೇಶನಗಳನ್ನು ಯಾವ ರೀತಿ ಹಂಚಿಕೆ ಮಾಡಲಾಗಿದೆ (ಪೂರ್ಣ ವಿವರಗಳನ್ನು ನೀಡುವುದು)?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದರೆ, ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.

ಆ) ಯಾವುದೇ ಭೂಮಿಯನ್ನು ಖರೀದಿಸಿರುವುದಿಲ್ಲ.

ಇ) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ನಿವೇಶನ ಹಂಚಿಕೆ ನಿಯಮ 1991 ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ಮೂಲೆ ನಿವೇಶನ ಇತ್ಯಾದಿ) ನಿಯಮ 1991 ಹಾಗೂ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮ 1991 ರನ್ವಯ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ.

208 (429) : ಶ್ರೀ ಹೆಚ್. ಆಂಜನೇಯ ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ಅರಣ್ಯ ಪ್ರದೇಶದಲ್ಲಿ ಎಷ್ಟು ಎಷ್ಟು ಭೂಮಿಯನ್ನು ಗಣಿಗಾರಿಕೆಗಾಗಿ ಮಂಜೂರಾತಿ ನೀಡಲಾಗಿದೆ: (ಗಣಿಗಾರಿಕೆಗೆ ಮಂಜೂರಾತಿ ಪಡೆದವರು ಹೆಸರು, ವಿಳಾಸಗಳನ್ನು ಒದಗಿಸುವುದು).

ಆ) ಈ ಗಣಿಗಾರರಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಸೇರಿದವರು ಎಷ್ಟು ಜನರಿದ್ದಾರೆ (ಪೂರ್ಣ ವಿವರ ಒದಗಿಸುವುದು)

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು)

ಅ) ಕರ್ನಾಟಕ ರಾಜ್ಯದ ಬಳ್ಳಾರಿ, ಬೆಳಗಾಂ, ಚಿಕ್ಕಮಗಳೂರು ಮತ್ತು ಚಿತ್ರದುರ್ಗದ ಅರಣ್ಯ ಪ್ರದೇಶಗಳಲ್ಲಿ ಒಟ್ಟು 7892.93 ಹೆಕ್ಟೇರ್ ಪ್ರದೇಶಕ್ಕೆ ಗಣಿ ಗುತ್ತಿಗೆ ನೀಡಲಾಗಿದೆ.

ಆ) ಗಣಿ ಗುತ್ತಿಗೆಗಾಗಿ ಕೋರಿ ಅರ್ಜಿಗಳನ್ನು ಎಂ.ಸಿ.ಆರ್. 1960ರ ನಿಯಮ 22(1) ರಡಿಯಲ್ಲಿ ಸಲ್ಲಿಸಬೇಕಾಗಿರುತ್ತದೆ. ಸದರಿ ನಿಯಮಗಳನ್ನು ಭಾರತ ಸರ್ಕಾರದಿಂದ ಜಾರಿಗೊಳಿಸಿದ್ದು, ಅರ್ಜಿಯಲ್ಲಿ ಜಾತಿ/ಪಂಗಡಗಳ ಬಗ್ಗೆ ನಮೂದಿಸಲು ಆಸ್ಪದವಿರುವುದಿಲ್ಲ.